# ನೇಮಕಾತಿ ಅಧಿಸೂಚನೆ

## ನೇಮಕಾತಿ ಪ್ರಕಟಣೆ

**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ಕಛೇರಿ, ಚಾಮರಾಜನಗರ**

**ಅಧಿಸೂಚನೆ ಸಂಖ್ಯೆ. ಎಡಿಎಮ್‌ಎನ್ / 01 /2022**

**ದಿನಾಂಕಃ 05.03.2022**

ವಿಷಯ ಃ ಚಾಮರಾಜನಗರ ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ ಶೀಘ್ರಲಿಪಿಗಾರರ, ಬೆರಳಚ್ಚುಗಾರರು, ಬೆರಳಚ್ಚು - ನಕಲುಗಾರರ, ಆದೇಶ ಜಾರಿಕಾರರು ಹಾಗೂ ಸೇವಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

-------------

ಮೇಲ್ಕಂಡ ಅಧಿಸೂಚನೆಯನ್ವಯ ಚಾಮರಾಜನಗರದ ಜಿಲ್ಲಾ ನ್ಯಾಯಾಂಗ ಘಟಕದ ಅಧೀನ ನ್ಯಾಯಾಲಯಗಳಲ್ಲಿ ಖಾಲಿ ಇರುವ 03 ಶೀಘ್ರಲಿಪಿಗಾರರ ಹಿಂಬಾಕಿ ಹುದ್ದೆಗಳಿಗೆ, 02 ಬೆರಳಚ್ಚುಗಾರರ ಹುದ್ದೆಗಳಿಗೆ, 03 ಬೆರಳಚ್ಚು - ನಕಲುಗಾರರ ಹುದ್ದೆಗಳಿಗೆ (01 ಹಿಂಬಾಕಿ ಹುದ್ದೆ), 06 ಆದೇಶ ಜಾರಿಕಾರರ ಹುದ್ದೆಗಳಿಗೆ ಹಾಗೂ 12 ಸೇವಕರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ (Online) ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕಃ 10.04.2022**

**ವಿಶೇಷ ಸೂಚನೆ ಃ**

1. ಅರ್ಜಿಗಳನ್ನು ಕಡ್ಡಾಯವಾಗಿ ಚಾಮರಾಜನಗರ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ https://districts.ecourts.gov.in/online-recruitment-chamarajanagar ನಲ್ಲಿ ನೀಡಲಾದ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ದಿನಾಂಕಃ **12.03.2022** ರಿಂದ ದಿನಾಂಕಃ **10.04.2022** ರ ರಾತ್ರಿ **11.59** ರವರೆಗೆ ಮಾತ್ರ ಸಲ್ಲಿಸತಕ್ಕದ್ದು ಹಾಗೂ ಆನ್‌ಲೈನ್ ಮೂಲಕ ಶುಲ್ಕ ಪಾವತಿಸಲು ದಿನಾಂಕಃ **11.04.2022** ರ ರಾತ್ರಿ **11.59** ರವರೆಗೆ ಮಾತ್ರ ಅವಕಾಶವಿರುತ್ತದೆ.
2. ಅಭ್ಯರ್ಥಿಗಳು ಅರ್ಜಿಯಲ್ಲಿ ತಮ್ಮ ಚಾಲ್ತಿಯಲ್ಲಿರುವ ದೂರವಾಣಿ ಸಂಖ್ಯೆ ಹಾಗೂ ಇ - ಮೇಲ್ ವಿಳಾಸವನ್ನು ಕಡ್ಡಾಯವಾಗಿ ನಮೂದಿಸಬೇಕು.
3. ಆನ್‌ಲೈನ್ ಹೊರತುಪಡಿಸಿ/ ಖುದ್ದಾಗಿ / ಅಂಚೆ ಮೂಲಕ / ಇನ್ನಾವುದೇ ರೀತಿಯಲ್ಲಿ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

## 1. ಹುದ್ದೆಯ ಹೆಸರು : ಶೀಘ್ರಲಿಪಿಗಾರರು

**a.** ಖಾಲಿ ಹುದ್ದೆಗಳ ಸಂಖ್ಯೆ : **03** ಹಿಂಬಾಕಿ ಹುದ್ದೆಗಳು

**b.** ವೇತನ ಶ್ರೇಣಿ : **27650-650-29600-750-32600-850-36000-950-39800-1100-46400-1250-52650/-**

| | | |
|---|---|---|
| **1.** | ಪ್ರವರ್ಗ - **IIIB** (ಇತರೆ) | **1** ಹುದ್ದೆ (ಹಿಂಬಾಕಿ) |
| **2.** | ಪರಿಶಿಷ್ಟ ಜಾತಿ (ಅಂಗವಿಕಲ)* | **1** ಹುದ್ದೆ (ಹಿಂಬಾಕಿ) |
| **3.** | ಪ್ರವರ್ಗ – **II**(ಎ) (ಅಂಗವಿಕಲ)* | **1** ಹುದ್ದೆ (ಹಿಂಬಾಕಿ) |
| | ಒಟ್ಟು | **3** ಹುದ್ದೆಗಳು (ಹಿಂಬಾಕಿ) |

* <u>ಅಂಗವಿಕಲ ಅಭ್ಯರ್ಥಿ</u> - ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ **149** ಎಸ್‌ಆರ್‌ಆರ್ **2020,** ಬೆಂಗಳೂರು, ದಿನಾಂಕ: **25.09.2020** ರನ್ವಯ ''ಒಂದು ವೇಳೆ ಅಧಿಸೂಚಿಸಿರುವ ಅಂಗವಿಕಲತೆ ಹೊಂದಿರುವ ಅಭ್ಯರ್ಥಿ ಲಭ್ಯವಿಲ್ಲದೇ ಇದ್ದಲ್ಲಿ, ಅಂತಹ ರಿಕ್ತ ಸ್ಥಾನವನ್ನು ಮುಂದಿನ ನೇಮಕಾತಿಗೆ ಮುಂದೊಯ್ಯಲಾಗುವುದು (Carry forward) ಮುಂದಿನ ನೇಮಕಾತಿಯಲ್ಲಿ ಅಂತಹ ಅಭ್ಯರ್ಥಿಗಳು ಆಯ್ಕೆಯಾದಲ್ಲಿ ಮೊದಲಿಗೆ ಈ ಹಿಂದಿನ ನೇಮಕಾತಿ ಪ್ರಕ್ರಿಯೆಯಲ್ಲಿ ಅಧಿಸೂಚಿಸಿ ಅಭ್ಯರ್ಥಿಗಳು ಲಭ್ಯವಿಲ್ಲದ ಕಾರಣ ಮುಂದಕ್ಕೆ ತರಲಾದ (Carry forward) ಹುದ್ದೆಗಳಿಗೆ ಎದುರಾಗಿ ಮೊದಲು ಅಂತಹ ಅಂಗವಿಕಲ ಅಭ್ಯರ್ಥಿಗಳನ್ನು ಭರ್ತಿ ಮಾಡಲಾಗುವುದು. ಒಂದು ವೇಳೆ ಎರಡನೇ ನೇಮಕಾತಿಯ ಸಂದರ್ಭದಲ್ಲಿಯೂ ಅರ್ಹ ಅಭ್ಯರ್ಥಿ ಲಭ್ಯವಾಗದೇ ಹೋದಲ್ಲಿ, ಆಯಾ ಪ್ರವರ್ಗದ ಇತರೆ ಅರ್ಹ ಅಭ್ಯರ್ಥಿಯಿಂದ ಭರ್ತಿ ಮಾಡಿಕೊಳ್ಳಲಾಗುವುದು.

*<u>ಶೈಕ್ಷಣಿಕ ವಿದ್ಯಾರ್ಹತೆ:</u>*

1. ದ್ವಿತೀಯ ಪಿ.ಯು.ಸಿ ಅಥವಾ ಮೂರು ವರ್ಷಗಳ ಡಿಪ್ಲೊಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು ಮತ್ತು
2. ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ನಡೆಸುವ ಹಿರಿಯ ದರ್ಜೆ (**senior grade**) ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ಹಾಗೂ ಶೀಘ್ರಲಿಪಿ ವಿಷಯಗಳಲ್ಲಿ ತೇರ್ಗಡೆ ಹೊಂದಿರಬೇಕು ಅಥವಾ ಡಿಪ್ಲೊಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್ / ಸೆಕ್ರೇಟರಿಯೇಟಲ್ ಪ್ರಾಕ್ಟೀಸ್ ಅಥವಾ ತತ್ಸಮಾನ ವಿದ್ಯಾರ್ಹತೆ.

## 2. ಹುದ್ದೆಯ ಹೆಸರು : ಬೆರಳಚ್ಚುಗಾರರು

**a.** ಖಾಲಿ ಹುದ್ದೆಗಳ ಸಂಖ್ಯೆ : **02** ಹುದ್ದೆಗಳು

**b.** ವೇತನ ಶ್ರೇಣಿ : **21400–500–22400–550–24600–600–27000–650–29600–750–32600–850–36000–950– 39800–1100- 42000/-**

| | | |
|---|---|---|
| **1.** | ಪ್ರವರ್ಗ – **II** (ಬಿ) (ಮಹಿಳೆ) | **1** ಹುದ್ದೆ |
| **2.** | ಸಾಮಾನ್ಯ ವರ್ಗ (ಮಹಿಳೆ) | **1** ಹುದ್ದೆ |
| | ಒಟ್ಟು | **2** ಹುದ್ದೆಗಳು |

*<u>ಶೈಕ್ಷಣಿಕ ವಿದ್ಯಾರ್ಹತೆ:</u>*

1. ದ್ವಿತೀಯ ಪಿ.ಯು.ಸಿ. ಅಥವಾ ಮೂರು ವರ್ಷಗಳ ಡಿಪ್ಲೊಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು ಮತ್ತು
2. ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ನಡೆಸುವ ಹಿರಿಯ ದರ್ಜೆ ( **Senior Grade**) ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ವಿಷಯಗಳಲ್ಲಿ ತೇರ್ಗಡೆ ಹೊಂದಿರಬೇಕು ಅಥವಾ ಅಥವಾ ಡಿಪ್ಲೊಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್ / ಸೆಕ್ರೇಟರಿಯೇಟಲ್ ಪ್ರಾಕ್ಟೀಸ್ ಅಥವಾ ತತ್ಸಮಾನ ವಿದ್ಯಾರ್ಹತೆ.

## 3. ಹುದ್ದೆಯ ಹೆಸರು : ಬೆರಳಚ್ಚು - ನಕಲುಗಾರರು

**a.** ಖಾಲಿ ಹುದ್ದೆಗಳ ಸಂಖ್ಯೆ : **03** ಹುದ್ದೆಗಳು (**01** ಹಿಂಬಾಕಿ ಹುದ್ದೆ)

**b.** ವೇತನ ಶ್ರೇಣಿ : **21400–500–22400–550–24600–600–27000–650–29600–750–32600–850–36000–950– 39800–1100- 42000/-**

| | |
|---|---|
| **1.** ಪರಿಶಿಷ್ಟ ಜಾತಿ (ಅಂಗವಿಕಲ) * | **1** ಹುದ್ದೆ (ಹಿಂಬಾಕಿ) |
| **2.** ಸಾಮಾನ್ಯ ವರ್ಗ (ಮಹಿಳೆ) | **1** ಹುದ್ದೆ |
| **3.** ಪ್ರವರ್ಗ – **II** (ಎ) (ಅಂಗವಿಕಲ) * | **1** ಹುದ್ದೆ |
| ಒಟ್ಟು | **3** ಹುದ್ದೆಗಳು |

* ಅಂಗವಿಕಲ ಅಭ್ಯರ್ಥಿ - ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ **149** ಎಸ್‌ಆರ್‌ಆರ್ **2020**, ಬೆಂಗಳೂರು, ದಿನಾಂಕ: **25.09.2020** ರನ್ವಯ ''ಒಂದು ವೇಳೆ ಅಧಿಸೂಚಿಸಿರುವ ಅಂಗವಿಕಲತೆ ಹೊಂದಿರುವ ಅಭ್ಯರ್ಥಿ ಲಭ್ಯವಿಲ್ಲದೇ ಇದ್ದಲ್ಲಿ, ಅಂತಹ ರಿಕ್ತ ಸ್ಥಾನವನ್ನು ಮುಂದಿನ ನೇಮಕಾತಿಗೆ ಮುಂದೂಡಲಾಗುತ್ತದೆ. (Carry forward) ಮುಂದಿನ ನೇಮಕಾತಿಯಲ್ಲಿ ಅಂತಹ ಅಭ್ಯರ್ಥಿಗಳು ಆಯ್ಕೆಯಾದಲ್ಲಿ ಮೊದಲಿಗೆ ಈ ಹಿಂದಿನ ನೇಮಕಾತಿ ಪ್ರಕ್ರಿಯೆಯಲ್ಲಿ ಅಧಿಸೂಚಿಸಿ ಅಭ್ಯರ್ಥಿಗಳು ಲಭ್ಯವಿಲ್ಲದ ಕಾರಣ ಮುಂದಕ್ಕೆ ತರಲಾದ (Carry forward) ಹುದ್ದೆಗಳಿಗೆ ಎದುರಾಗಿ ಮೊದಲು ಅಂತಹ ಅಂಗವಿಕಲ ಅಭ್ಯರ್ಥಿಗಳನ್ನು ಭರ್ತಿ ಮಾಡಲಾಗುತ್ತದೆ. ಒಂದು ವೇಳೆ ಎರಡನೇ ನೇಮಕಾತಿಯ ಸಂದರ್ಭದಲ್ಲಿಯೂ ಅರ್ಹ ಅಭ್ಯರ್ಥಿ ಲಭ್ಯವಾಗದೇ ಹೋದಲ್ಲಿ, ಆಯಾ ಪ್ರವರ್ಗದ ಇತರೆ ಅರ್ಹ ಅಭ್ಯರ್ಥಿಯಿಂದ ಭರ್ತಿ ಮಾಡಿಕೊಳ್ಳಲಾಗುವುದು.

*ಶೈಕ್ಷಣಿಕ ವಿದ್ಯಾರ್ಹತೆ:*

1. ದ್ವಿತೀಯ ಪಿ.ಯು.ಸಿ. ಅಥವಾ ಮೂರು ವರ್ಷಗಳ ಡಿಪ್ಲೊಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು ಮತ್ತು
2. ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ನಡೆಸುವ ಕಿರಿಯ ದರ್ಜೆ (**Junior Grade**) ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ವಿಷಯಗಳಲ್ಲಿ ತೇರ್ಗಡೆ ಹೊಂದಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ ಅಂದರೆ ಡಿಪ್ಲೊಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್ / ಸೆಕ್ರೇಟರಿಯೇಟಲ್ ಪ್ರಾಕ್ಟೀಸ್ ಅಥವಾ ತತ್ಸಮಾನ ವಿದ್ಯಾರ್ಹತೆ.

## 4. ಹುದ್ದೆಯ ಹೆಸರು : ಆದೇಶ ಜಾರಿಕಾರರು

**a.** ಖಾಲಿ ಹುದ್ದೆಗಳ ಸಂಖ್ಯೆ : **06** ಹುದ್ದೆಗಳು

**b.** ವೇತನ ಶ್ರೇಣಿ : **19950-450-20400-500-22400-550-24600-600-27000-650-29600-750-32600-850-36000- 950-37900/-**

| | |
|---|---|
| **1.** ಪರಿಶಿಷ್ಟ ಜಾತಿ (ಮಹಿಳೆ) | **1** ಹುದ್ದೆ |
| **2.** ಸಾಮಾನ್ಯ ವರ್ಗ (ಕನ್ನಡ ಮಾಧ್ಯಮ) | **1** ಹುದ್ದೆ |
| **3.** ಪ್ರವರ್ಗ – **II** (ಎ) (ಮಹಿಳೆ) | **1** ಹುದ್ದೆ |
| **4.** ಸಾಮಾನ್ಯ ವರ್ಗ (ಮಹಿಳೆ) | **1** ಹುದ್ದೆ |
| **5.** ಪ್ರವರ್ಗ – **I** (ಮಹಿಳೆ) | **1** ಹುದ್ದೆ |
| **6.** ಸಾಮಾನ್ಯ ವರ್ಗ (ಗ್ರಾಮೀಣ) | **1** ಹುದ್ದೆ |
| ಒಟ್ಟು | **6** ಹುದ್ದೆಗಳು |

ಶೈಕ್ಷಣಿಕ ವಿದ್ಯಾರ್ಹತೆ:

1. ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.
2. ಡ್ರೈವಿಂಗ್ ಲೈಸೆನ್ಸ್‌ನ್ನು ಹೊಂದಿದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.
3. ಕನ್ನಡ ಓದಲು ಮತ್ತು ಬರೆಯಲು ತಿಳಿದಿರಬೇಕು (ಕನ್ನಡ ಓದಲು ಹಾಗೂ ಬರೆಯಲು ಹಾಗೂ ಸಾಮಾನ್ಯ ಜ್ಞಾನದ ಬಗ್ಗೆ ಪರೀಕ್ಷೆ ನಡೆಸಲಾಗುವುದು)

## 5. ಹುದ್ದೆಯ ಹೆಸರು : ಸೇವಕರು

**a.** ಖಾಲಿ ಹುದ್ದೆಗಳ ಸಂಖ್ಯೆ : **12** ಹುದ್ದೆಗಳು

**b.** ವೇತನ ಶ್ರೇಣಿ : **17000-400-18600-450-20400-500-22400-550-24600-600-27000-650- 28950/-**

| | |
|---|---|
| **1.** ಪ್ರವರ್ಗ – **II** (ಎ) (ಗ್ರಾಮೀಣ) | **1** ಹುದ್ದೆ |
| **2.** ಸಾಮಾನ್ಯ ವರ್ಗ (ಮಹಿಳೆ) | **1** ಹುದ್ದೆ |
| **3.** ಪ್ರವರ್ಗ – **I** (ಗ್ರಾಮೀಣ) | **1** ಹುದ್ದೆ |
| **4.** ಸಾಮಾನ್ಯ ವರ್ಗ (ಗ್ರಾಮೀಣ) | **1** ಹುದ್ದೆ |
| **5.** ಪರಿಶಿಷ್ಟ ಜಾತಿ (ಮಾಜಿ ಸೈನಿಕ) | **1** ಹುದ್ದೆ |
| **6.** ಸಾಮಾನ್ಯ ವರ್ಗ (ಮಾಜಿ ಸೈನಿಕ) | **1** ಹುದ್ದೆ |
| **7.** ಪ್ರವರ್ಗ – **II** (ಬಿ) (ಗ್ರಾಮೀಣ) | **1** ಹುದ್ದೆ |
| **8.** ಸಾಮಾನ್ಯ ವರ್ಗ (ಇತರೆ) | **1** ಹುದ್ದೆ |
| **9.** ಪ್ರವರ್ಗ – **II** (ಎ) (ಮಾಜಿ ಸೈನಿಕ) | **1** ಹುದ್ದೆ |
| **10.** ಸಾಮಾನ್ಯ ವರ್ಗ (ಮಹಿಳೆ) | **1** ಹುದ್ದೆ |
| **11.** ಪ್ರವರ್ಗ – **III** (ಬಿ) (ಗ್ರಾಮೀಣ) | **1** ಹುದ್ದೆ |
| **12.** ಸಾಮಾನ್ಯ ವರ್ಗ (ಗ್ರಾಮೀಣ) | **1** ಹುದ್ದೆ |
| ಒಟ್ಟು | **12** ಹುದ್ದೆಗಳು |

ಶೈಕ್ಷಣಿಕ ವಿದ್ಯಾರ್ಹತೆ:

೧. ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.

೨. ಕನ್ನಡ ಓದಲು ಮತ್ತು ಬರೆಯಲು ತಿಳಿದಿರಬೇಕು (ಕನ್ನಡ ಓದಲು ಹಾಗೂ ಬರೆಯಲು ಹಾಗೂ ಸಾಮಾನ್ಯ ಜ್ಞಾನದ ಬಗ್ಗೆ ಪರೀಕ್ಷೆ ನಡೆಸಲಾಗುವುದು)

| ನೇಮಕಾತಿ ವಿಧಾನ | | |
|---|---|---|
| 1. | ಶೀಘ್ರಲಿಪಿಗಾರ | ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ಒಂದು ನಿಮಿಷಕ್ಕೆ 120 ಪದಗಳ ದರದಲ್ಲಿ 5 ನಿಮಿಷಗಳ ಉಕ್ತಲೇಖನವನ್ನು ತೆಗೆದುಕೊಂಡು 45 ನಿಮಿಷಗಳಲ್ಲಿ ಅನುಲಿಪಿ ಮಾಡುವ "ಸಾಮರ್ಥ್ಯ ಪರೀಕ್ಷೆ" ಯಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ 1 : 5 ಅನುಪಾತದಲ್ಲಿ ಸಂದರ್ಶನ ನಡೆಸಲಾಗುವುದು. ("ಸಾಮರ್ಥ್ಯ ಪರೀಕ್ಷೆ" ಯಲ್ಲಿ ಗರಿಷ್ಟ ಅಂಕಗಳು 100 ಮತ್ತು ಪರೀಕ್ಷೆ ಪಾಸಾಗಲು ಶೇಕಡಾ 50 ಗಳಿಸಿರಬೇಕು.) |
| 2. | ಬೆರಳಚ್ಚುಗಾರ | ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು 15 ನಿಮಿಷಗಳ ಉಕ್ತಲೇಖನದಲ್ಲಿ ಕೊಡುವ ವಿಷಯವನ್ನು ಬೆರಳಚ್ಚು ಮಾಡುವ "ಸಾಮರ್ಥ್ಯ ಪರೀಕ್ಷೆ" ಯಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ 1 : 5 ಅನುಪಾತದಲ್ಲಿ ಸಂದರ್ಶನ ನಡೆಸಲಾಗುವುದು ("ಸಾಮರ್ಥ್ಯ ಪರೀಕ್ಷೆ" ಯಲ್ಲಿ ಗರಿಷ್ಟ ಅಂಕಗಳು 100 ಮತ್ತು ಪರೀಕ್ಷೆ ಪಾಸಾಗಲು ಶೇಕಡಾ 50 ಗಳಿಸಿರಬೇಕು.) |
| 3. | ಬೆರಳಚ್ಚು - ನಕಲುಗಾರ | ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು 15 ನಿಮಿಷಗಳ ಉಕ್ತಲೇಖನದಲ್ಲಿ ಕೊಡುವ ವಿಷಯವನ್ನು ಬೆರಳಚ್ಚು ಮಾಡುವ "ಸಾಮರ್ಥ್ಯ ಪರೀಕ್ಷೆ" ಯಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ 1 : 5 ಅನುಪಾತದಲ್ಲಿ ಸಂದರ್ಶನ ನಡೆಸಲಾಗುವುದು ("ಸಾಮರ್ಥ್ಯ ಪರೀಕ್ಷೆ" ಯಲ್ಲಿ ಗರಿಷ್ಟ ಅಂಕಗಳು 100 ಮತ್ತು ಪರೀಕ್ಷೆ ಪಾಸಾಗಲು ಶೇಕಡಾ 50 ಗಳಿಸಿರಬೇಕು.) |
| 4. | ಆದೇಶ ಜಾರಿಕಾರ | ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ ಆಧಾರದ ಮೇಲೆ 1 : 25 ಅನುಪಾತದಲ್ಲಿ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. (ಕನ್ನಡ ಓದಲು ಹಾಗೂ ಬರೆಯಲು ಹಾಗೂ ಸಾಮಾನ್ಯ ಜ್ಞಾನದ ಬಗ್ಗೆ ಪರೀಕ್ಷೆ 10 ಅಂಕಗಳಿಗೆ ನಡೆಸಲಾಗುವುದು) |

| | | |
|---|---|---|
| 5 | ಸೇವಕ | ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಪಡೆದ ಗರಿಷ್ಟ ಅಂಕಗಳ ಅರ್ಹತೆಯ ಆಧಾರದ ಮೇಲೆ **1 : 10** ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. (ಕನ್ನಡ ಓದಲು ಹಾಗೂ ಬರೆಯಲು ಹಾಗೂ ಸಾಮಾನ್ಯ ಜ್ಞಾನದ ಬಗ್ಗೆ ಪರೀಕ್ಷೆ **10** ಅಂಕಗಳಿಗೆ ನಡೆಸಲಾಗುವುದು) |

## ಸೂಚನೆ

**1.** ಮೇಲೆ ತಿಳಿಸಿದ ಹುದ್ದೆಗಳಿಗೂ **10** ಅಂಕಗಳನ್ನು ಸಂದರ್ಶನಕ್ಕೆ ನಿಗದಿಸಲಾಗಿದೆ.

**2.** ಆಯ್ಕೆಯ ಪಟ್ಟಿಯನ್ನು ಕರ್ನಾಟಕ ರಾಜ್ಯ ಪತ್ರ ಅಧಿಸೂಚನೆ ನಂ **LAW 01 LAC 2005, Bengaluru, Dated 13.02.2008 Rule 4(g)** ಪ್ರಕಾರ ಪ್ರಕಟಿಸಲಾಗುವುದು.

## ಪರಿವೀಕ್ಷಣಾ ಅವಧಿ :

ಆಯ್ಕೆಯಾದ ಅಭ್ಯರ್ಥಿಗಳನ್ನು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣಾ ನಿಯಮಗಳು) **1977** ರ ಪ್ರಕಾರ **2** ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಅವರುಗಳ ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ, ಕನ್ನಡ ಭಾಷಾ ಪರೀಕ್ಷೆಯಲ್ಲಿ ಮತ್ತು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

## ವಯೋಮಿತಿ ಸಡಿಲಿಕೆ :

**i.** ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು

**a)** ಕನಿಷ್ಠ **18** ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ಮತ್ತು ಗರಿಷ್ಠ ವಯಸ್ಸನ್ನು ಮೀರಿರಕೂಡದು.

**b)** ಗರಿಷ್ಟ ವಯೋಮಿತಿ :

| | |
|---|---|
| ಸಾಮಾನ್ಯ ವರ್ಗ | **35** ವರ್ಷ ಮೀರಿರಬಾರದು |
| ಪ್ರವರ್ಗ **2**ಎ, **2**ಬಿ, **3**ಎ, **3**ಬಿ | **38** ವರ್ಷ ಮೀರಿರಬಾರದು |
| ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ / ಪ್ರವರ್ಗ – **1** | **40** ವರ್ಷ ಮೀರಿರಬಾರದು |

**ii.** ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ **10** ವರ್ಷಗಳ ಅವಧಿ, ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.

iii. ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ, ಅವನು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ **03** ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು

iv. ಅಭ್ಯರ್ಥಿಯು ಅಂಗವಿಕಲನಾಗಿದ್ದಲ್ಲಿ, ವಿಧವೆಯಾಗಿದ್ದಲ್ಲಿ ಮತ್ತು ಜೀತ ಕಾರ್ಮಿಕನಾಗಿದ್ದಲ್ಲಿ **10** ವರ್ಷಗಳು

v. ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸೇವೆ ಸಲ್ಲಿಸಿದ್ದಾರೋ ಅಷ್ಟು ವರ್ಷಗಳ ಅಥವಾ **05** ವರ್ಷಗಳ ಅವಧಿ, ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು

vi. ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು

vii. ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕೊಂಡು ಗ್ರಾಮ ಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು

## ಅರ್ಜಿ ಸಲ್ಲಿಸುವ ವಿಧಾನ :

ನಿಗದಿತ ಅರ್ಜಿ ಶುಲ್ಕ ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನ :

| | |
|---|---|
| ಸಾಮಾನ್ಯ ವರ್ಗ, ಪ್ರವರ್ಗ – 2ಎ, 2ಬಿ, 3ಎ ಮತ್ತು 3ಬಿ ಸೇರಿದ ಅಭ್ಯರ್ಥಿಗಳಿಗೆ | ರೂ. 200/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ – 1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ | ಶುಲ್ಕ ವಿನಾಯಿತಿ ಇರುತ್ತದೆ |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ https://districts.ecourts.gov.in/online-recruitment-chamarajanagar ರಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ **State Bank Collect** ಮೂಲಕ **Online Payment through Net – Banking / Credit – Card / Debit – Card** ಸೌಲಭ್ಯದ ಮೂಲಕ ಮಾತ್ರ ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ ಚಲನ್ಃ ಡಿಮ್ಯಾಂಡ್ ಡ್ರಾಫ್ಟ್ ಃ ಪೋಸ್ಟಲ್ ಆರ್ಡರ್ಃ ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

## ಅಭ್ಯರ್ಥಿಗಳು ON-LINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.

1. ಅಭ್ಯರ್ಥಿಗಳು ಅರ್ಜಿಯನ್ನು **ON-LINE** ಮೂಲಕ ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
2. ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ-ಮೇಲ್ ಐಡಿಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ **SMS** ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪಿದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.
3. ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

ಅ) ಬಣ್ಣದ ಭಾವಚಿತ್ರವು ಇತ್ತೀಚಿನದ್ದಾಗಿದ್ದು ಅಳತೆಯಲ್ಲಿ **5cm** ಉದ್ದ × **3.6 cm** ಅಗಲವುಳ್ಳದಾಗಿರಬೇಕು ಮತ್ತು **50 kb** ಅಳತೆಯದ್ದಾಗಿರಬೇಕು ಹಾಗೂ ಅದು **.jpg** ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು.

ಆ) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು)

ಇ) ಅಭ್ಯರ್ಥಿಯು ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (**2.5 cm** ಉದ್ದ × **7.5 cm** ಅಗಲವುಳ್ಳದಾಗಿರಬೆಕು ಮತ್ತು **26 kb** ಅಳತೆಯದ್ದಾಗಿರಬೇಕು ಹಾಗೂ **.jpg** ನಮೂನೆಯಲ್ಲಿರಬೇಕು) ಅಪ್‌ಲೊಡ್ ಮಾಡಬೇಕು.

4. ತದನಂತರ ಅಭ್ಯರ್ಥಿಯು **ON-LINE** ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನೂ ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಶುಲ್ಕವನ್ನು ತುಂಬಿದ ಪ್ರತಿಯನ್ನು **Download** ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
5. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂದಿರುಗಿಸಲಾಗುವುದಿಲ್ಲ.
6. ನ್ಯಾಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೊಂದಾಯಿಸಲು/ ಸಲ್ಲಿಸಲು ದಿನಾಂಕಃ **10.04.2022** ರಾತ್ರಿ **11.59** ರವರೆಗೆ ಅವಕಾಶವಿರುತ್ತದೆ ಮತ್ತು ಆನ್‌ಲೈನ್ ಮೂಲಕ ಶುಲ್ಕ ಪಾವತಿಸಲು ದಿನಾಂಕಃ **11.04.2022** ರಾತ್ರಿ **11.59** ರವರೆಗೆ ಅವಕಾಶವಿರುತ್ತದೆ.
7. ಅರ್ಹ ಅಭ್ಯರ್ಥಿಗಳಿಗೆ **SMS & E- Mail** ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುವುದು. ಸದರಿ ಪಟ್ಟಿಯ ಆಧಾರದ ಮೇಲೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು.

8. ಆನ್‌ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
9. ಸೇವಾನಿರತ ಅಭ್ಯರ್ಥಿಗಳು ಅರ್ಜಿಗಳ ಸ್ವೀಕೃತಿಗಾಗಿ ನಿಗದಿಪಡಿಸಲಾದ ದಿನಾಂಕ ಹಾಗೂ ಸಮಯವನ್ನು ಮೀರದಂತೆ ಆನ್‌ಲೈನ್‌ನಲ್ಲಿ ತಮ್ಮ ಅರ್ಜಿಗಳನ್ನು ಸಲ್ಲಿಸತಕ್ಕದ್ದು ಮತ್ತು ಸಂಬಂಧಪಟ್ಟ ಪ್ರಾಧಿಕಾರದಿಂದ ನೀಡಲಾದ "ನಿರಾಕ್ಷೇಪಣಾ ಪ್ರಮಾಣಪತ್ರ'' ವನ್ನೂ ಹೊಂದಿರತಕ್ಕದ್ದು.
10. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ 'ಡಿ' ಯಲ್ಲಿ, ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ 'ಇ' ಯಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ ಸಂಬಂಧಿಸಿದ ತಹಸೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣಪತ್ರಗಳನ್ನು ಹೊಂದಿರತಕ್ಕದ್ದು.
11. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿ. 19.11.2005 ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ: ಸಿಆಸುಇ/ 115/ ಸಸೆನಿ / 2005 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣಪತ್ರವನ್ನು ಪಡೆದಿರಬೇಕು.
12. ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ / ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರವನ್ನು ಸಲ್ಲಿಸುವುದು.
13. ವಿಧವೆಯರು, ಜೀತ ಕಾರ್ಮಿಕರು ಮತ್ತು ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು.
14. ಮೇಲ್ಕಂಡ ಪ್ರಯೋಜನಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದಂದು ಅಥವಾ ಅದಕ್ಕಿಂತ ಮುಂಚೆ ಸಕ್ಷಮ ಪ್ರಾಧಿಕಾರಿಗಳು ನೀಡಿದ ಸಂಬಂಧಪಟ್ಟ ಪ್ರಮಾಣ ಪತ್ರಗಳನ್ನು ಹೊಂದಿರತಕ್ಕದ್ದು.
15. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಲ್ಲಿ, ಮಹಿಳಾ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು, ಯೋಜನಾ ನಿರಾಶ್ರಿತ ಅಭ್ಯರ್ಥಿಗಳು, ಗ್ರಾಮೀಣ ಅಭ್ಯರ್ಥಿಗಳು ಹಾಗೂ ಕನ್ನಡ ಮಾಧ್ಯಮ ಅಭ್ಯರ್ಥಿಗಳ ಮೀಸಲಾತಿಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.
16. ಅಭ್ಯರ್ಥಿಗಳು ತಮ್ಮ ಎಸ್.ಎಸ್.ಎಲ್.ಸಿ., ಅಂಕಗಳು ಶ್ರೇಣಿಯಲ್ಲಿದ್ದರೆ ಅಥವಾ CGPA ಆಗಿದ್ದರೆ ಅದನ್ನು ಅಂಕಗಳಾಗಿ ಪರಿವರ್ತಿಸಿ ಗರಿಷ್ಠ ಅಂಕಗಳು, ಪಡೆದ ಅಂಕಗಳು ಮತ್ತು ಒಟ್ಟು ಶೇಕಡಾವಾರನ್ನು ಕಡ್ಡಾಯವಾಗಿ ನಿಗಧಿತ ಕಾಲಂನಲ್ಲಿ ನಮೂದಿಸಬೇಕು.
17. ಮೌಖಿಕ ಪರೀಕ್ಷೆಯ ಸಮಯದಲ್ಲಿ ದಾಖಲೆಗಳ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು ಶೈಕ್ಷಣಿಕ ವಿದ್ಯಾರ್ಹತೆ (ಜನ್ಮ ದಿನಾಂಕವನ್ನು ತೋರಿಸಲು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ, ದ್ವಿತೀಯ ಪಿ.ಯು.ಸಿ ಅಂಕಪಟ್ಟಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ, ಶೀಘ್ರಲಿಪಿ ಪರೀಕ್ಷೆಗಳ ಪ್ರಮಾಣ ಪತ್ರಗಳನ್ನು, ಬೆರಳಚ್ಚು ಪರೀಕ್ಷೆಗಳ ಪ್ರಮಾಣ ಪತ್ರಗಳನ್ನು, ಜಾತಿ ಪ್ರಮಾಣ ಪತ್ರ, ಗ್ರಾಮೀಣ/ ಮಾಜಿ ಸೈನಿಕರು / ವಿಧವೆಯರು / ಅಂಗವಿಕಲರು ಸಂಬಂಧಿಸಿದಂತೆ ಕ್ಲೇಮು ಮಾಡಿದ ಮೀಸಲಾತಿಗಳು ಇವುಗಳಿಗೆ ಸಂಬಂಧಿಸಿದಂತೆ ಅಗತ್ಯ ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಪರಿಶೀಲನೆ ಮಾಡುವಾಗ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳೆಂದು ಕಂಡುಬಂದಲ್ಲಿ ಆಗ ಅವರ ಅಭ್ಯರ್ಥಿಕೆಯು ತಿರಸ್ಕೃತವಾಗುತ್ತದೆ ಹಾಗೂ ಅವರು ಸುಳ್ಳು ಮಾಹಿತಿ ನೀಡಿದ್ದಕ್ಕಾಗಿ ಕ್ರಿಮಿನಲ್ ಪ್ರಾಸಿಕ್ಯೂಷನ್‌ಗೂ ಸಹ ಗುರಿಯಾಗಬೇಕಾಗುತ್ತದೆ.

18. ನೈತಿಕ ದುರ್ನಡತೆಯಿಂದಾಗಿ / ನೀತಿಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ರಾಜ್ಯ / ಕೇಂದ್ರ / ಸ್ಥಳೀಯ ಸಂಸ್ಥೆ ಕಛೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ ಅಥವಾ ನೀತಿಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ / ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದು ಹಾಕಿದ್ದಲ್ಲಿ / ವಜಾ ಮಾಡಲ್ಪಟ್ಟಿದ್ದು ಕಂಡುಬಂದಲ್ಲಿ ನೇಮಕಾತಿಗೆ ಅನರ್ಹರಾಗುತ್ತಾರೆ.

19. ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ ಹಾಗೂ ಕಾನೂನು ಕ್ರಮ ಜರುಗಿಸಲಾಗುವುದು.

20. ಅಭ್ಯರ್ಥಿಗಳ ಆಯ್ಕೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ.

21. ಪಿಂಚಣಿ ಸೌಲಭ್ಯ ಃ ಸರ್ಕಾರದ ಆದೇಶ ಸಂಖ್ಯೆಃ ಎಫ್‌ಡಿ(ಎಸ್‌ಪಿಎಲ್) 04 ಪೀಇಟಿ 2005, ದಿನಾಂಕ ಃ 31.03.2006 ರಂತೆ.

22. ಅಭ್ಯಥಿಯು ನೇಮಕಾತಿ ಸಂಬಂಧ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವುದು ಕಂಡುಬಂದಲ್ಲಿ ಅಂತಹವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

23. ಅರ್ಹತಾ ಪರೀಕ್ಷೆಗೆ ಹಾಗೂ ಸಂದರ್ಶನಕ್ಕೆ ಆಯ್ಕೆಯಾಗುವ ಅಭ್ಯರ್ಥಿಗಳು ಚಾಮರಾಜನಗರದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.

(ಬಿ.ಎಸ್. ಭಾರತಿ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಾಮರಾಜನಗರ.

ಪ್ರತಿಯನ್ನು ಮಾನ್ಯ ಮಹಾ ವಿಲೇಖನಾಧಿಕಾರಿಗಳು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರಿಗೆ (ಪತ್ರದೊಂದಿಗೆ) ಸಲ್ಲಿಸಲಾಗಿದೆ.

ಪ್ರತಿಯನ್ನು ಃ

1. ರಾಜ್ಯದ ಎಲ್ಲಾ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯಗಳ (ಆಡಳಿತ) ಇವರಿಗೆ ತಮ್ಮ ಸೂಚನಾ ಫಲಕದಲ್ಲಿ ಪ್ರಕಟಿಸಲು ವಿನಂತಿ. ಪ್ರಧಾನ ನಗರ ಸಿವಿಲ್ ಮತ್ತು ಸತ್ರ ನ್ಯಾಯಾಧೀಶರು, ನಗರ ಸಿವಿಲ್ ಮತ್ತು ಸತ್ರ ನ್ಯಾಯಾಲಯ, ಬೆಂಗಳೂರು ನಗರ, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಗ್ರಾಮಾಂತರ, ಬಾಗಲಕೋಟೆ, ಬೆಳಗಾಂ, ಬಳ್ಳಾರಿ, ಬೀದರ್, ಬಿಜಾಪುರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಕ್ಷಿಣ ಕನ್ನಡ (ಮಂಗಳೂರು), ದಾವಣಗೆರೆ, ಧಾರವಾಡ ,ಗದಗ, ಗುಲ್ಬರ್ಗಾ, ಹಾವೇರಿ, ಕೊಪ್ಪಳ, ಕೊಡಗು (ಮಡಕೇರಿ), ಮಂಡ್ಯ ಮೈಸೂರು, ರಾಯಚೂರು, ರಾಮನಗರ, ಶಿವಮೊಗ್ಗ, ತುಮಕೂರು, ಉಡುಪಿ , ಉತ್ತರ ಕನ್ನಡ (ಕಾರವಾರ), ಯಾದಗಿರಿ. ಕೋಲಾರ, ಹಾಸನ.

2. ವಾರ್ತಾಧಿಕಾರಿಗಳು, ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಚಾಮರಾಜನಗರ ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.

3. ಈ ಜಿಲ್ಲೆಯ ಎಲ್ಲಾ ಪೀಠಾಸೀನಾಧಿಕಾರಿಗಳು (ಆಡಳಿತ) ಇವರಿಗೆ ತಮ್ಮ ನ್ಯಾಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು.
4. ಕರ್ನಾಟಕ ರಾಜ್ಯ ಗೆಜೆಟ್ ಪ್ರಕಟಣೆಗಾಗಿ : ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ಸರ್ಕಾರಿ ಹೊರವಲಯ ಮತ್ತು ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು-560059.
5. ಉದ್ಯೋಗಾಧಿಕಾರಿಗಳು, ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಚಾಮರಾಜನಗರ.
6. ನಿರ್ದೇಶಕರು, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ, ಬೆಂಗಳೂರು – ಇವರಿಗೆ ರಾಜ್ಯಾದ್ಯಂತ ವ್ಯಾಪಕ ಪ್ರಚಾರದಲ್ಲಿರುವ ಎರಡು ದಿನ ಪತ್ರಿಕೆಗಳಲ್ಲಿ ಪ್ರಕಟಿಸುವಂತೆ ಕೋರಿ.
7. ಸಾಫ್ಟ್‌ವೇರ್ ಟೆಕ್ನೀಷಿಯನ್, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಾಮರಾಜನಗರ.
8. ಈ ನ್ಯಾಯಾಲಯದ ಸೂಚನಾ ಫಲಕಕ್ಕೆ.